**ಸಾಕ್ಷಿಯನ್ನು ದಿಃ 20.02.2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ಚೆಕ್ ನಂ. 000060 ರ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ನಿಪಿ. 1 ಎಂದು, ಬ್ಯಾಂಕ್ ನವರು ನೀಡಿರುವ ಒಂದು ಹಿಂಬರಹದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ. 2 ಎಂದು,

ಮೂರು ವಕೀಲರ ನೋಟೀಸ್ ನ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ. 3 ಎಂದು,

ಅಂಚೆ ರಶೀದಿಯ ದೃಢೀಕೃತ ನಕಲನ್ನು ಹಾಜರು ಪಡಿದ್ದು ಅದನ್ನು ನಿಪಿ. 4 ಎಂದು,

ಎರಡು ಅಂಚೆ ಲಕೋಟೆಯ ದೃಢೀಕೃತ ನಕಲನ್ನು ಹಾಜರು ಪಡಿದ್ದು ಒಟ್ಟಾಗಿ ನಿಪಿ. 5 ಎಂದು,

ಪಿ.ಸಿ.ಆರ್ 1803/2021 ರ ಆದೇಶ ಪುಟದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ. 6 ಎಂದು ಗುರುತಿಸಲಾಯಿತು. ಅದುದರಿಂದ ನಾನು ಕೋರಿರುವಂತೆ ದಾವೆಯನ್ನು ಡಿಕ್ರಿ ಮಾಡಬೇಕಾಗಿ ಪ್ರಾರ್ಥಿಸುತ್ತೇನೆ.

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ**

ಪ್ರತಿವಾದಿ ಹಾಗೂ ಅವರ ಪರ ವಕೀಲರನ್ನು ಕೂಗಿ ಕರೆಯಿಸಲಾಗಿ ಗೈರು ಹಾಜರಿದ್ದು, ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು
ಮೈಸೂರು.